# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 940

2) ಸದಸ್ಯರ ಹೆಸರು : ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ : 11-03-2026

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಜಾರಿಗೆ ತರಲಾದ ಯೋಜನೆಗಳ ವಿವರಗಳನ್ನು **ಅನುಬಂಧ – 1A, 1B, 1C** ರಲ್ಲಿ ಒದಗಿಸಲಾಗಿದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕೆ ಇಲಾಖೆಗೆ ಎಷ್ಟು ಅನುದಾನ ಮಂಜೂರಾಗಿದೆ; ಅದರ ಬಳಕೆ ಪ್ರಮಾಣ ಎಷ್ಟು; | ಕಳೆದ ಮೂರು ವರ್ಷಗಳಲ್ಲಿ ಮೀನುಗಾರಿಕೆ ಇಲಾಖೆಗೆ ಮಂಜೂರಾದ ಅನುದಾನ, ಬಿಡುಗಡೆಯಾದ ಅನುದಾನ ಹಾಗೂ ವೆಚ್ಚದ ಮಾಹಿತಿ ಈ ಕೆಳಗಿನಂತಿದೆ:- (ತಳಗಿನ ಪಟ್ಟಿ ನೋಡಿ) |

ರೂ. ಲಕ್ಷಗಳಲ್ಲಿ

| ವರ್ಷ | ಆಯವ್ಯಯ | ಬಿಡುಗಡೆ | ವೆಚ್ಚ | ಬಳಕೆ ಪ್ರಮಾಣ |
|---|---|---|---|---|
| 2022-23 | 332.86 | 299.72 | 288.39 | 96.22% |
| 2023-24 | 368.03 | 342.94 | 334.90 | 97.65% |
| 2024-25 | 351.42 | 334.21 | 317.34 | 94.95% |

| | ಪ್ರಶ್ನೆ | ಉತ್ತರ |
|---|---|---|
| ಇ) | ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ಮಂಜೂರು ಮಾಡಲಾಗಿದೆ; (ಯೋಜನಾವಾರು ಮಾಹಿತಿ ಒದಗಿಸುವುದು) | ಮಂಜೂರು ಮಾಡಲಾದ ಅನುದಾನದ ಯೋಜನಾವಾರು ಮಾಹಿತಿಯನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. |
| ಈ) | ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ರಾಜ್ಯಕ್ಕೆ ಎಷ್ಟು ನಿಧಿ ಬಂದಿದೆ? | ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ (ಶೇ. 60% ಕೇಂದ್ರದ ಪಾಲು) ಬಿಡುಗಡೆ ಮಾಡಿದ ಅನುದಾನದ ವಿವರ ಈ ಕೆಳಗಿನಂತಿದೆ; (ತಳಗಿನ ಪಟ್ಟಿ ನೋಡಿ) |

ರೂ. ಲಕ್ಷಗಳಲ್ಲಿ

| 2020-21 | 2021-22 | 2022-23 | 2023-24 | 2024-25 | ಒಟ್ಟು |
|---|---|---|---|---|---|
| 6235.30 | 9927.68 | 6608.00 | 2981.77 | 3793.07 | 29545.82 |

ಸಂಖ್ಯೆ: ಪಸಂಮೀ ಇ-55 ಮೀಇಯೋ 2026

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಕೆ. ಅಬ್ದುಲ್ ಜಬ್ಬಾರ್ ರವರ

ಚುಕ್ಕೆ ಗುರುತಿಲ್ಲದ ಪ್ರ.ಸಂ. ೧40ಕ್ಕೆ <u>ಅನುಬಂಧ-1 (A)</u>

## <u>2022-23ನೇ ಸಾಲಿನಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:</u>

### 1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ:

a. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

b. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

c. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 400 ಘಟಕಗಳಿಗೆ ಸಹಾಯಧನ ನೀಡುವ ಉದ್ದೇಶದಿಂದ 2 ಕೋಟಿ ರೂ.ಗಳನ್ನು ನೀಡಲಾಗಿದೆ.

d. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್‌ಗೆ ರೂ.2.50 ಲಕ್ಷ ಸಹಾಯಧನ ನೀಡಲಾಗುವುದು.

### 2. "ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಉಚಿತವಾಗಿ ಮೀನುಮರಿ ಬಿತ್ತನೆ"

ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆದಾಯ ತರುವ ದೃಷ್ಟಿಯಿಂದ ಮತ್ತು ಗ್ರಾಮ ಪಂಚಾಯಿತಿಗಳನ್ನು ಬಲಪಡಿಸುವ ಉದ್ದೇಶದಿಂದ ಆಯ್ದ 5650 ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಪ್ರತೀ ಕೆರೆಯ ಜಲವಿಸ್ತೀರ್ಣಕ್ಕನುಗುಣವಾಗಿ ಗರಿಷ್ಠ ರೂ.10,000/- ಮೌಲ್ಯದ ಬಲಿತ ಬಿತ್ತನೆ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನು ಕೃಷಿಯನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಮೀನು ಕೃಷಿಯನ್ನು ಅಭಿವೃದ್ಧಿಪಡಿಸಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಉಚಿತವಾಗಿ ಮೀನುಮರಿ ಬಿತ್ತನೆ" ಯೋಜನೆಯಡಿ ರೂ. 5.65 ಕೋಟಿ ವೆಚ್ಚದಲ್ಲಿ 5650 ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಮೀನುಮರಿಗಳನ್ನು ಬಿತ್ತನೆ ಮಾಡಲಾಗುವುದು.

### 3. ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

### 4.ನೀಲಿ ಕ್ರಾಂತಿ/ PMMSY - ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ)

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೊಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ, ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯ ಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ.

### 5.ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ

ಅನುಸೂಚಿತ ಜಾತಿ ಮತ್ತು ಪಂಗಡಕ್ಕೆ ಸೇರಿದ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆಗೆ ಅವಕಾಶ ಮಾಡಲಾಗಿದೆ.

### 6.ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. 2019-20ನೇ ಸಾಲಿನಿಂದ ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ರೂ. 6.00 ಲಕ್ಷ ಪರಿಹಾರ ನೀಡಲಾಗುವುದು. ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.50 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ. 3.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುತ್ತಿದೆ.

### 7.ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಏಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

### 8.ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ

A.ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

B.ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗವುದು.

**9.ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ**

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

**10.ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**a)ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

**b)ಸಾಮೂಹಿಕ ವಿಮಾ ಯೋಜನೆ**

ರಾಜ್ಯದ 79000 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.500,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿ, ದೆಹಲಿಗೆ ಬಿಡುಗಡೆ ಮಾಡಲಾಗುವುದು.

**11.ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು**

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ.

**<u>4405-ಬಂಡವಾಳ ಹೂಡಿಕೆಗಳು:</u>**

**12.ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

**13.ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು

ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

**14.ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ.

**<u>ಜಿಲ್ಲಾ ಪಂಚಾಯತ್ ಯೋಜನೆಗಳು</u>**

**1.ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

**2.ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

**3.ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.1,20,000/- ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**4.ಪ್ರದರ್ಶನ ಮತ್ತು ತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಮೀನುಗಾರಿಕೆ ನಿರ್ದೇಶಕರು.

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಕೆ. ಅಬ್ದುಲ್ ಜಬ್ಬಾರ್ ರವರ

ಚುಕ್ಕೆ ಗುರುತಿಲ್ಲದ ಪ್ರ.ಸಂ. 940 ಕ್ಕೆ <u>ಅನುಬಂಧ-1 (B)</u>

## 2023-24ನೇ ಸಾಲಿನಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:

### 1. ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು :

ಹಿಂದಿನ ಸಾಲಿನವರೆಗೆ ಪ್ರತ್ಯೇಕ ಲೆಕ್ಕಶೀರ್ಷಿಕೆಗಳಡಿ ಅನುಷ್ಠಾನಗೊಳಿಸಲಾಗುತ್ತಿದ್ದ 5 ಯೋಜನೆಗಳನ್ನು ಪ್ರಸಕ್ತ 2023-24 ನೇ ಸಾಲಿನಿಂದ ಒಂದೇ ಲೆಕ್ಕಶೀರ್ಷಿಕೆಯಡಿ (2405-00-101-0-03) ವಿಲೀನಗೊಳಿಸಿ ಅನುಷ್ಠಾನಗೊಳಿಸಲಾಗುವುದು.

### 1.1 ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

b. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು “ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ” ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

c. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನುಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

d. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು.

e. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್ ಗೆ ರೂ.2.50ಲಕ್ಷ ಸಹಾಯಧನ ನೀಡಲಾಗುವುದು.

f. ಮೀನಿನ ಮರಿ ಉತ್ಪಾದನೆಯನ್ನು ಹೆಚ್ಚಿಸುವ ಒಂದು ತಂತ್ರವೆಂದರೆ ಮೀನು ಉತ್ಪಾದನೆ/ಸಾಕಣೆ ಕೇಂದ್ರಗಳಲ್ಲಿ ಸೌಲಭ್ಯಗಳ ಉನ್ನತೀಕರಣ (ಆಧುನೀಕರಣ) ಮೂಲಕ ಅಸ್ತಿತ್ವದಲ್ಲಿರುವ ಮೀನು ಸಾಕಣೆ ಸಾಮರ್ಥ್ಯದ ಬಳಕೆಯನ್ನು ಹೆಚ್ಚಿಸುವುದು. ಈ ನಿಟ್ಟಿನಲ್ಲಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣವನ್ನು ಇದೇ ಲೆಕ್ಕಶೀರ್ಷಿಕೆಯಡಿ ಕೈಗೊಳ್ಳಲಾಗುತ್ತಿದೆ.

g. ರಾಜ್ಯದ ಆಯ್ದ ಗ್ರಾಮಪಂಚಾಯಿತಿ ಕೆರೆಗಳಲ್ಲಿ ಪ್ರತಿ ಕೆರೆಯ ಜಲವಿಸ್ತೀರ್ಣಕ್ಕೆ ಅನುಗುಣವಾಗಿ ರೂ. 10000/- ಮೌಲ್ಯದ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನುಕೃಷಿಯನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ.

1.2 **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ**

a) ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b) ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗವುದು.

1.3 **ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ**

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

1.4 **ಮಂಜುಗಡ್ಡೆ ಸ್ಥಾವರಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ**

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

1.5 **ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನುತುಂಬಿಕೊಡುವುದು**

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.
ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ. ಪ್ರಸಕ್ತ 2023-24 ನೇ ಸಾಲಿನಿಂದ ಸದರಿ ಯೋಜನೆಯಡಿ ಸಾಲದ ಮಿತಿಯನ್ನು ರೂ.50,000/-ಗಳಿಂದ ರೂ.3,00,000/- ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

2. **PMMSY-ಪ್ರಧಾನ ಮಂತ್ರಿ ಮತ್ಸ್ಯಸಂಪದಯೋಜನೆ (ಕೇಂದ್ರ ಪುರಸ್ಕೃತ ಯೋಜನೆ)**

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೊಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ,

ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯ ಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದ.

3. **ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :**

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಆವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುತ್ತಿದೆ.

4. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

5.**ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟತೆರಿಗೆ ಮರುಪಾವತಿ**

2021-22ನೇ ಸಾಲಿನಿಂದ ಯಾಂತ್ರೀಕೃತ ದೋಣಿಗಳಿಗೆ 1.5 ಲಕ್ಷ ಕಿಲೋಲೀಟರ್ ಡೀಸಲ್ ಡೆಲಿವರಿ ಪಾಯಿಂಟ್‌ನಲ್ಲಿಯೇ ಕರರಹಿತ ದರದಲ್ಲಿ ವಿತರಿಸಲಾಗುತ್ತಿದೆ.ಪ್ರಸ್ತುತ 2023-24 ನೇ ಸಾಲಿನಲ್ಲಿ ಮೀನುಗಾರರ ದೋಣಿಗಳಿಗೆ ನೀಡುತ್ತಿರುವ ಡೀಸೆಲ್ ಮಿತಿಯನ್ನು 1.5 ಲಕ್ಷ ಕಿಲೋಲೀಟರ್‌ನಿಂದ 2.00 ಲಕ್ಷ ಕಿಲೋ ಲೀಟರ್ ಗೆ ಹೆಚ್ಚಿಸಲಾಗಿದೆ.

6.**ಮತ್ಸ್ಯಾಶ್ರಯ ಯೋಜನೆ:**

ರಾಜ್ಯ ಸರ್ಕಾರವು 2006-07ನೇ ಸಾಲಿನಿಂದ "ಮತ್ಸ್ಯಾಶ್ರಯ ಯೋಜನೆ"ಯನ್ನು ಪ್ರಾರಂಭಿಸಿದ್ದು, ಇದರ ಅಡಿಯಲ್ಲಿ ವಸತಿ ರಹಿತ ಮೀನುಗಾರರು ಅಥವಾ ವಾಸಿಸಲುಯೋಗ್ಯಮನೆ ಇಲ್ಲದ ಮೀನುಗಾರರಿಗೆ ಪ್ರತಿ ವರ್ಷ ಅನುದಾನ ಲಭ್ಯತೆಯ ಆಧಾರದ ಮೇಲೆ ಮನೆಗಳನ್ನು ಹಂಚಿಕೆಮಾಡಲಾಗುತ್ತದೆ.

2023-24ನೇ ಸಾಲಿನಲ್ಲಿ ಯಾವುದೇ ಮನೆಗಳು ಮಂಜೂರಾಗಿಲ್ಲ. ಆದರೆ ಹಿಂದಿನ ವರ್ಷದಲ್ಲಿ ಮಂಜೂರಾದ ಮನೆಗಳ ನಿರ್ಮಾಣಕ್ಕಾಗಿ ಅನುದಾನ ನಿಗದಿಪಡಿಸಲಾಗಿದೆ.

7.**ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

**ಆ) ಸಾಮೂಹಿಕ ವಿಮಾ ಯೋಜನೆ:**

ರಾಜ್ಯದ 80,000 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.500,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ಹೈದರಾಬಾದ್ ನಲ್ಲಿರುವ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗುವುದು.

**8.ಮೀನುಗಾರಿಕೆ ಬಂದರುಗಳ ನಿರ್ಮಾಣ: (ಕೇಂದ್ರ ಪುರಸ್ಕೃತ ಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

**9.ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ:**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

**10.ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ.**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಅಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

**11. ಮೀನುಗಾರರ ಮಕ್ಕಳಿಗೆ ವಿದ್ಯಾನಿಧಿ ಯೋಜನೆ:**

ಕರ್ನಾಟಕ ರಾಜ್ಯದಲ್ಲಿ ಸುಮಾರು 10 ಲಕ್ಷ ಮೀನುಗಾರರಿದ್ದು, ಮೀನುಗಾರರು ಆರ್ಥಿಕವಾಗಿ ಹಿಂದುಳಿದವರಾಗಿರುತ್ತಾರೆ. ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಶಿಷ್ಯವೇತನ (Scholarship) ಯೋಜನೆ-" ವಿದ್ಯಾನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

## ಜಿಲ್ಲಾ ಪಂಚಾಯತ್ ಯೋಜನೆಗಳು:

### 1.ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

### 2.ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

### 3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ

ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**4.ಪ್ರದರ್ಶನ ಮತ್ತು ತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಮೀನುಗಾರಿಕೆ ನಿರ್ದೇಶಕರು.

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ. ಕೆ. ಅಬ್ದುಲ್ ಜಬ್ಬರ್ ರವರ
ಚುಕ್ಕೆ ಗುರುತಿಲ್ಲದ ಪ್ರ.ಸಂ. ೧೪೦ಕ್ಕೆ **ಅನುಬಂಧ-1 (C)**

## 2024-25ನೇ ಸಾಲಿನಲ್ಲಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರ:

### 1. ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು :

ಹಿಂದಿನ ಸಾಲಿನವರಗೆ ಪ್ರತ್ಯೇಕ ಲೆಕ್ಕಶೀರ್ಷಿಕೆಗಳಡಿ ಅನುಷ್ಠಾನಗೊಳಿಸಲಾಗುತ್ತಿದ್ದ 5 ಯೋಜನೆಗಳನ್ನು ಪ್ರಸಕ್ತ 2023-24 ನೇ ಸಾಲಿನಿಂದ ಒಂದೇ ಲೆಕ್ಕಶೀರ್ಷಿಕೆಯಡಿ (2405-00-101-0-03) ವಿಲೀನಗೊಳಿಸಿ ಅನುಷ್ಠಾನಗೊಳಿಸಲಾಗುವುದು.

### 1.1 ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

a. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

b. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನುಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

c. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು.

d. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್ ಗೆ ರೂ.2.50ಲಕ್ಷ ಸಹಾಯಧನ ನೀಡಲಾಗುವುದು.

e. ಮೀನಿನ ಮರಿ ಉತ್ಪಾದನೆಯನ್ನು ಹೆಚ್ಚಿಸುವ ಒಂದು ತಂತ್ರವೆಂದರೆ ಮೀನು ಉತ್ಪಾದನೆ/ಸಾಕಣೆ ಕೇಂದ್ರಗಳಲ್ಲಿ ಸೌಲಭ್ಯಗಳ ಉನ್ನತೀಕರಣ (ಆಧುನೀಕರಣ) ಮೂಲಕ ಅಸ್ತಿತ್ವದಲ್ಲಿರುವ ಮೀನು ಸಾಕಣೆ ಸಾಮರ್ಥ್ಯದ ಬಳಕೆಯನ್ನು ಹೆಚ್ಚಿಸುವುದು. ಈ ನಿಟ್ಟಿನಲ್ಲಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣವನ್ನು ಇದೇ ಲೆಕ್ಕಶೀರ್ಷಿಕೆಯಡಿ ಕೈಗೊಳ್ಳಲಾಗುತ್ತಿದೆ.

f. ರಾಜ್ಯದ ಆಯ್ದ ಗ್ರಾಮಪಂಚಾಯಿತಿ ಕೆರೆಗಳಲ್ಲಿ ಪ್ರತಿ ಕೆರೆಯ ಜಲವಿಸ್ತೀರ್ಣಕ್ಕೆ ಅನುಗುಣವಾಗಿ ರೂ. 10000/- ಮೌಲ್ಯದ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನುಕೃಷಿಯನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ.

### 1.2 ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ

c) ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

d) ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗವುದು.

### 1.3 ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುತ್ತಿದೆ.

### 1.4 ಮಂಜುಗಡ್ಡೆ ಸ್ಥಾವರಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

### 1.5 ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನುತುಂಬಿಕೊಡುವುದು

ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ
ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು
ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ
ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.
ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ
ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ
ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ. ಪ್ರಸಕ್ತ 2023-24 ನೇ
ಸಾಲಿನಿಂದ ಸದರಿ ಯೋಜನೆಯಡಿ ಸಾಲದ ಮಿತಿಯನ್ನು ರೂ.50,000/-ಗಳಿಂದ ರೂ.3,00,000/-
ಗಳವರೆಗೆ ಹೆಚ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

## 2. PMMSY-ಪ್ರಧಾನ ಮಂತ್ರಿ ಮತ್ಸ್ಯಸಂಪದಯೋಜನೆ (ಕೇಂದ್ರ ಪುರಸ್ಕೃತ ಯೋಜನೆ)

ಮೀನುಗಾರಿಕೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಯೊಜನೆಯಡಿ ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ಅಲಂಕಾರಿಕಾ ಮತ್ತು ಮನರಂಜನಾ ಮೀನುಗಾರಿಕೆ ಅಭಿವೃದ್ಧಿ, ನೂತನ ತಂತ್ರಜ್ಞಾನ ಅಳವಡಿಕೆ, ಹಿಡುವಳಿ ನಂತರದ ಶೀತಲ ಸರಪಳಿ ಮೂಲ ಸೌಕರ್ಯ, ಮೀನು ಆಹಾರ ತಯಾರಿಕಾ ಘಟಕ,

ಮೀನುಮಾರುಕಟ್ಟೆಗಳು ಮತ್ತು ಮಾರಾಟ ಮೂಲ ಸೌಕರ್ಯ ಗಳಿಗೆ ಸಹಾಯಧನ ನೀಡಲಾಗುತ್ತಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ.40 ರಷ್ಟು ಸಹಾಯಯಧನ ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇಕಡ. 60 ರಷ್ಟು ಸಹಾಯಯಧನವನ್ನು ನೀಡಲಾಗುತ್ತಿದೆ.

**3. ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು :**

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. 2024-25ನೇ ಸಾಲಿನಿಂದ, ಈ ನಿಧಿಯಿಂದ ಮೀನುಗಾರಿಕೆ ಚಟುವಟಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಆವಲಂಬಿತರಿಗೆ ರೂ. 10 ಲಕ್ಷ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ. 4.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ. 2.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ. 3.00 ಲಕ್ಷ ನೆರವು ನೀಡಲು ಅವಕಾಶವಿದೆ.

**4. ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮ ಏಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

**5. ಮತ್ಸ್ಯಾಶ್ರಯ ಯೋಜನೆ:**

ರಾಜ್ಯ ಸರ್ಕಾರವು 2006-07ನೇ ಸಾಲಿನಿಂದ "ಮತ್ಸ್ಯಾಶ್ರಯ ಯೋಜನೆ"ಯನ್ನು ಪ್ರಾರಂಭಿಸಿದ್ದು, ಇದರ ಅಡಿಯಲ್ಲಿ ವಸತಿ ರಹಿತ ಮೀನುಗಾರರು ಅಥವಾ ವಾಸಿಸಲುಯೋಗ್ಯಮನೆ ಇಲ್ಲದ ಮೀನುಗಾರರಿಗೆ ಪ್ರತಿ ವರ್ಷ ಅನುದಾನ ಲಭ್ಯತೆಯ ಆಧಾರದ ಮೇಲೆ ಮನೆಗಳನ್ನು ಹಂಚಿಕೆಮಾಡಲಾಗುತ್ತದೆ.

2023-24ನೇ ಸಾಲಿನಲ್ಲಿ ಯಾವುದೇ ಮನೆಗಳು ಮಂಜೂರಾಗಿಲ್ಲ. ಆದರೆ ಹಿಂದಿನ ವರ್ಷದಲ್ಲಿ ಮಂಜೂರಾದ ಮನೆಗಳ ನಿರ್ಮಾಣಕ್ಕಾಗಿ ಅನುದಾನ ನಿಗದಿಪಡಿಸಲಾಗಿದೆ.

**6.ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

**ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ**

ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

**ಆ) ಮೀನುಗಾರರ ಕಲ್ಯಾಣ ಕಾರ್ಯಕ್ರಮಕ್ಕೆ ಹೆಚ್ಚುವರಿ ರಾಜ್ಯದ ಪಾಲು (ಮತ್ಸ್ಯ ಆಶಾಕಿರಣ):**

ಈ ಮೇಲ್ಕಂಡ ಯೋಜನೆಗೆ ಸಂಬಂಧಿಸಿದಂತೆ, 2024-25ನೇ ಸಾಲಿನಿಂದ ಮೀನುಗಾರರ ಹಿತದೃಷ್ಟಿಯಿಂದ, ರಾಜ್ಯದ ಪಾಲಿನ ಮೊತ್ತವನ್ನು ಹೆಚ್ಚುವರಿಯಾಗಿ ರೂ. 1500/- ಪ್ರತಿ ಮೀನುಗಾರರಿಗೆ ನೀಡಲಾಗುತ್ತಿದೆ.

**ಇ) ಸಾಮೂಹಿಕ ವಿಮಾ ಯೋಜನೆ:**

ರಾಜ್ಯದ 80,000 ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.500,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ಹೈದರಾಬಾದ್ ನಲ್ಲಿರುವ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗುವುದು.

**8.ಮೀನುಗಾರಿಕೆ ಬಂದರುಗಳ ನಿರ್ಮಾಣ: (ಕೇಂದ್ರ ಪುರಸ್ಕೃತ ಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

**9.ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ:**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

**10.ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ.**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಅಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

**11. ಮೀನುಗಾರರ ಮಕ್ಕಳಿಗೆ ವಿದ್ಯಾನಿಧಿ ಯೋಜನೆ:**

ಕರ್ನಾಟಕ ರಾಜ್ಯದಲ್ಲಿ ಸುಮಾರು 10 ಲಕ್ಷ ಮೀನುಗಾರರಿದ್ದು, ಮೀನುಗಾರರು ಆರ್ಥಿಕವಾಗಿ ಹಿಂದುಳಿದವರಾಗಿರುತ್ತಾರೆ. ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಶಿಷ್ಯವೇತನ (Scholarship) ಯೋಜನೆ-" ವಿದ್ಯಾನಿಧಿ" ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

## ಜಿಲ್ಲಾ ಪಂಚಾಯತ್ ಯೋಜನೆಗಳು:

### 1.ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

### 2.ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

### 3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ

ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**4.ಪ್ರದರ್ಶನ ಮತ್ತು ತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಮೀನುಗಾರಿಕೆ ನಿರ್ದೇಶಕರು.

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಅಬ್ದುಲ್ ಜಬ್ಬಾರ್ ರವರ

ಚುಕ್ಕೆ ಗುರುತಿಲ್ಲದ ಪ್ರ.ಸಂ. ೧೪೦ ಕ್ಕೆ ಅನುಬಂಧ-02

**2022-23 ನೇ ಸಾಲಿನಿಂದ 2024-25 ನೇ ಸಾಲಿನ ವರೆಗೆ ವರ್ಷವಾರು ಆಯವ್ಯಯ ಮತ್ತು ವೆಚ್ಚದ ಮಾಹಿತಿ**

ಇಲಾಖೆ: ಮೀನುಗಾರಿಕೆ

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಯೋಜನೆ/ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ | 2022-23 | | | 2023-24 | | | 2024-25 | | |
|---|---|---|---|---|---|---|---|---|---|---|
| | | ಆಯವ್ಯಯ | ಬಿಡುಗಡೆ | ವೆಚ್ಚ | ಆಯವ್ಯಯ | ಬಿಡುಗಡೆ | ವೆಚ್ಚ | ಆಯವ್ಯಯ | ಬಿಡುಗಡೆ | ವೆಚ್ಚ |
| ರಾಜ್ಯ ವಲಯ | | | | | | | | | | |
| S01 | ನಿರ್ದೇಶನ ಮತ್ತು ಆಡಳಿತ 2405-00-001-0-01 | 2977.72 | 3274.70 | 3088.72 | 3878.79 | 3878.79 | 3726.44 | 4826.79 | 4826.79 | 4227.69 |
| S02 | ಖಾಲಿ ಹುದ್ದೆಗಳಿಗೆ ಅನುದಾನ 2405-00-001-0-50 | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S03 | ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಕಾರ್ಯಕ್ರಮಗಳು (ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ* ) 2405-00-101-0-03 | 970.00 | 920.00 | 919.19 | 1780.00 | 1779.98 | 1707.96 | 1674.55 | 1674.55 | 1674.54 |
| S04 | ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ * 2405-00-101-0-54 | 200.00 | 200.00 | 199.97 | 0.00 | 0.00 | 0.00 | 0.00 | 0.00 | 0.00 |
| S05 | ನೀಲಿ ಕ್ರಾಂತಿ ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ-ಕೇ.ಪು.ಯೋ. 2405-00-101-0-58 | 6280.14 | 6280.13 | 6280.13 | 10685.35 | 8915.65 | 8915.65 | 10454.20 | 10454.20 | 9812.81 |
| S06 | ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು 2405-00-103-0-17 | 2015.00 | 2015.00 | 2015.00 | 3839.32 | 3839.32 | 3838.95 | 3000.00 | 3000.00 | 3000.00 |
| S07 | ಮೋಟರೀಕೃತ ಮೀನುಗಾರಿಕೆ ದೋಣಿಗಳ ಹೊಸ ಇಂಜಿನ್ ಖರೀದಿಗೆ ಸಹಾಯಧನ 2405-00-103-0-24 | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S08 | ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ ಮಾರಾಟ ತೆರಿಗೆ ಮರುಪಾವತಿ 2405-00-103-0-23 | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S09 | ಮೀನುಗಾರಿಕೆ ಸಲಕರಣೆ ಕಿಟ್ಟುಗಳ ಸರಬರಾಜು * 2405-00-110-0-02 | 125.00 | 125.00 | 124.92 | 0.00 | 0.00 | 0.00 | 0.00 | 0.00 | 0.00 |
| S10 | ಮಂಜುಗಡ್ಡೆ ಸ್ಥಾವರಗಳು ಬಳಸುವ ವಿದ್ಯುತ್ ಮೇಲೆ ಸಹಾಯಧನ * 2405-00-110-0-03 | 400.00 | 400.00 | 399.97 | 0.00 | 0.00 | 0.00 | 0.00 | 0.00 | 0.00 |
| | **ಮೀನುಗಾರರ ಕಲ್ಯಾಣ ಯೋಜನೆಗಳು ಕೆ.ಪು.ಯೋ** | | | | | | | | | |

| ಕ್ರ.ಸಂ | ಯೋಜನೆ/ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ | 2022-23 | | | 2023-24 | | | 2024-25 | | |
|---|---|---|---|---|---|---|---|---|---|---|
| | | ಆಯವ್ಯಯ | ಬಿಡುಗಡೆ | ವೆಚ್ಚ | ಆಯವ್ಯಯ | ಬಿಡುಗಡೆ | ವೆಚ್ಚ | ಆಯವ್ಯಯ | ಬಿಡುಗಡೆ | ವೆಚ್ಚ |
| ಅ) | ಉಳಿತಾಯ ಮತ್ತು ಪರಿಹಾರ ಯೋಜನೆ 2405-00-120-0-07 | 612.00 | 612.00 | 612.00 | 612.00 | 408.00 | 408.00 | 1155.16 | 1155.16 | 1155.16 |
| ಆ) | ಸಮೂಹಿಕ ಅಪಘಾತ ವಿಮಾ ಯೋಜನೆ | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S10 | ವಾಣಿಜ್ಯ ಬ್ಯಾಂಕುಗಳಿಗೆ ವ್ಯತ್ಯಾಸದ ಬಡ್ಡಿ ಮರುಪಾವತಿ * 2405-00-195-0-01 | 50.00 | 50.00 | 49.91 | 0.00 | 0.00 | 0.00 | 0.00 | 0.00 | 0.00 |
| S11 | ಕರಾವಳಿ ಕೂಡು ರಸ್ತೆಗಳ ನಿರ್ವಹಣೆ 2405-00-337-0-01 | 0.00 | 0.00 | 0.00 | 2343.00 | 2343.00 | 2343.00 | 0.00 | 0.00 | 0.00 |
| S12 | ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ 2405-00-101-0-66 | 1.02 | 1.02 | 1.01 | 0.00 | 0.00 | 0.00 | 11.38 | 11.38 | 11.38 |
| S13 | ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು 2405-00-103-0-15 | 0.00 | 0.00 | 0.00 | 400.00 | 400.00 | 400.00 | 400.00 | 400.00 | 400.00 |
| S14 | ತುಂಗಾ ಭದ್ರಾ ನಿಗಮದ ಮೀನುಗಾರಿಕೆಯ ಖರ್ಚಿನ ಪಾಲು 2405-00-101-0-31 | 0.00 | 0.00 | 0.00 | 1.00 | 0.00 | 0.00 | 1.00 | 1.00 | 0.00 |
| S15 | ವಿದ್ಯಾನಿಧಿ ಯೋಜನೆ 2202-80-107-0-08 | 3972.00 | 500.00 | 1.24 | 100.00 | 80.00 | 69.67 | 100.00 | 82.19 | 82.19 |
| S16 | ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ 2405-00-101-0-67 | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S17 | ಮತ್ಸ್ಯಾಶ್ರಯ ಯೋಜನೆ 2405-00-103-0-20 | 0.00 | 0.00 | 0.00 | 482.51 | 333.33 | 200.00 | 0.00 | 0.00 | 0.00 |
| S18 | ಸೀಮೆ ಎಣ್ಣೆ ದೋಣಿಗಳನ್ನು ಪೆಟ್ರೋಲ್ ದೋಣಿಗಳಾಗಿ ಪರಿವರ್ತಿಸಲು ಪ್ರೋತ್ಸಾಹ 2405-00-103-0-24 | 0.00 | 0.00 | 0.00 | 160.68 | 0.00 | 0.00 | 0.00 | 0.00 | 0.00 |
| S19 | ಗಿರಿಜನ ಪ್ರದೇಶ ಉಪ ಯೋಜನೆ | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S20 | ಮೀನುಮಾರುಕಟ್ಟೆ ನಿರ್ಮಾಣಕ್ಕೆ ಸಹಾಯ | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| S21 | ಮೀನುಗಾರರ ಕಲ್ಯಾಣ ಕಾರ್ಯಕ್ರಮಕ್ಕೆ ಹೆಚ್ಚುವರಿ ರಾಜ್ಯದ ಪಾಲು ( ಮತ್ಸ್ಯ ಆಶಾ ಕಿರಣ) 2405-00-120-0-09 | 0.00 | 0.00 | 0.00 | 0.00 | 0.00 | 0.00 | 300.00 | 257.80 | 257.80 |
| | **ಒಟ್ಟು ರಾಜ್ಯ ವಲಯ** | **17602.88** | **14377.85** | **13692.06** | **24282.65** | **21978.07** | **21609.67** | **21923.08** | **21863.07** | **20621.57** |
| **ಜಿಲ್ಲಾ ವಲಯ** | | | | | | | | | | |

| ಕ್ರ.ಸಂ | ಯೋಜನೆ/ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ | 2022-23 | | | 2023-24 | | | 2024-25 | | |
|---|---|---|---|---|---|---|---|---|---|---|
| | | **ಆಯವ್ಯಯ** | **ಬಿಡುಗಡೆ** | **ವೆಚ್ಚ** | **ಆಯವ್ಯಯ** | **ಬಿಡುಗಡೆ** | **ವೆಚ್ಚ** | **ಆಯವ್ಯಯ** | **ಬಿಡುಗಡೆ** | **ವೆಚ್ಚ** |
| D01 | ಜಿಲ್ಲಾ ಮತ್ತು ಇತರೆ ಸಿಬ್ಬಂದಿ<br>2405-00-101-0-26 | 3219.68 | 3304.75 | 2972.49 | 3789.17 | 3789.17 | 3471.53 | 3919.58 | 4174.66 | 3805.04 |
| D02 | ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ<br>2405-00-101-0-27 | 480.61 | 452.85 | 384.39 | 503.05 | 428.99 | 366.57 | 503.05 | 427.82 | 427.82 |
| D03 | ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ<br>2405-00-101-0-28 | 782.91 | 786.48 | 750.65 | 914.90 | 914.59 | 866.27 | 1135.61 | 1135.61 | 1061.56 |
| D04 | ಮೀನು ಮಾರುಕಟ್ಟೆಗಳ ಪುನರ್ ನಿರ್ಮಾಣ ಮತ್ತು ಮೀನುಮಾರಾಟಕ್ಕೆ ಒದಗುವ ಸಾಮಗ್ರಿಗಳ ಖರೀದಿಗೆ ಸಹಾಯ<br>2405-00-101-0-30 | 172.90 | 172.90 | 166.84 | 191.10 | 191.07 | 186.83 | 191.10 | 191.10 | 188.41 |
| D05 | ಪ್ರದರ್ಶನ ಮತ್ತು ತರಬೇತಿ<br>2405-00-101-0-32 | 134.25 | 134.25 | 131.95 | 150.25 | 150.19 | 146.76 | 156.26 | 156.26 | 155.93 |
| | **ಒಟ್ಟು ಜಿಲ್ಲಾ ವಲಯ** | **4790.35** | **4851.23** | **4406.32** | **5548.47** | **5474.01** | **5037.96** | **5905.60** | **6085.45** | **5638.76** |
| **ಕಾಮಗಾರಿಗಳು** | | | | | | | | | | |
| CW1 | ಮೀನುಗಾರಿಕೆ ಬಂದರುಗಳ ಹೂಳೆತ್ತುವಿಕೆ-ಕೇ.ಪು.ಯೋ<br>4405-00-103-1-02 | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| CW2 | ಮೀನುಗಾರಿಕೆ ಬಂದರುಗಳ ನಿರ್ಮಾಣ - ಕೇ.ಪು.ಯೋ<br>4405-00-103-6-01 & 02 | 7193.00 | 7193.00 | 7192.60 | 4771.99 | 4771.99 | 4771.99 | 215.00 | 0.00 | 0.00 |
| CW3 | ಫಲಾನುಭವಿಗಳಲ್ಲದ ಮೂಲಸೌಕರ್ಯ ಸಂಬಂಧಿತ ಕೆಲಸಗಳು - ಕೇ.ಪು.ಯೋ<br>4405-00-103-6-03 & 04 | 0.00 | 0.00 | 0.00 | 0.00 | 0.00 | 0.00 | 0.00 | 0.00 | 0.00 |
| CW4 | ಮೀನುಗಾರಿಕೆ ಜೆಟ್ಟಿ ಮತ್ತು ಮೀನು ಇಳಿದಾಣಗಳ ನಿರ್ಮಾಣ / ಮೀನುಗಾರಿಕೆ ಬಂದರುಗಳ ಇಳಿದಾಣ ಕೇಂದ್ರಗಳ ನವೀಕರಣ ಮತ್ತು ಹೂಳೆತ್ತುವ ಕಾರ್ಯಕ್ರಮ.<br>4405-00-104-0-02 | 3500.00 | 3500.00 | 3500.00 | 1570.00 | 1570.00 | 1570.00 | 3854.32 | 3837.49 | 3837.49 |
| CW5 | ಮೀನುಗಾರಿಕೆ ಕೊಂಡಿ ರಸ್ತೆಗಳ, ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ- ನಬಾರ್ಡ ಸಹಾಯ<br>4405-00-800-2-03 | 200.00 | 50.00 | 47.52 | 500.00 | 500.00 | 500.00 | 1636.00 | 1636.00 | 1636.00 |

| ಕ್ರ.ಸಂ | ಯೋಜನೆ/ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ | 2022-23 | | | 2023-24 | | | 2024-25 | | |
|---|---|---|---|---|---|---|---|---|---|---|
| | | ಆಯವ್ಯಯ | ಬಿಡುಗಡೆ | ವೆಚ್ಚ | ಆಯವ್ಯಯ | ಬಿಡುಗಡೆ | ವೆಚ್ಚ | ಆಯವ್ಯಯ | ಬಿಡುಗಡೆ | ವೆಚ್ಚ |
| CW6 | ಹಾವೇರಿ ಜಿಲ್ಲೆಯಲ್ಲಿ ಮೀನುಮರಿ ಉತ್ಪಾದನಾ ಮತ್ತು ಪಾಲನಾ ಕೇಂದ್ರ ಸ್ಥಾಪನೆ 4405-00-101-3-01 | 0.00 | 0.00 | 0.00 | 130.00 | 0.00 | 0.00 | 0.00 | 0.00 | 0.00 |
| | **ಒಟ್ಟು ಕಾಮಗಾರಿಗಳು** | **10893.00** | **10743.00** | **10740.12** | **6971.99** | **6841.99** | **6841.99** | **5705.32** | **5473.49** | **5473.49** |
| | **ಒಟ್ಟಾರೆ** | **33286.23** | **29972.08** | **28838.50** | **36803.11** | **34294.07** | **33489.62** | **33534.00** | **33422.01** | **31733.82** |

ಮೀನುಗಾರಿಕೆ ನಿರ್ದೇಶಕರು